volume-9 issue-210 rni/karkan/71496 prise 1rs paje 2 17-10-25 friday chamarajanagar nimcenturybird@gmail.com

ಸುದ್ದಿ ಹಾಗೂ ಜಾಹಿರಾತಿಗೆ ಸಂಪರ್ಕಿಸಿ 7553233037

# ನಿಂಪು ವಾರ್ತೆ

ಸಂಪಾದಕ ಎನ್.ರಾಜೇಶ್ ಕನ್ನಡ ದಿನ ಪತ್ರಿಕೆ ಚಾಮರಾಜನಗರ ಜಿಲ್ಲೆ mob: 7353233047

ಗುಂಡ್ಲುಪೇಟೆ ಯಳಂದೂರು ತಾಲೂಕುಗಳಲ್ಲಿ ವರದಿಗಾರರು ಬೇಕಾಗಿದ್ದಾರೆ

ಸಂಪುಟ-9 ಸಂಚಿಕೆ - 210 ದಿನಾಂಕ 17-10-25 ಶುಕ್ರವಾರ ಚಾಮರಾಜನಗರ ಪುಟ 2 ಬೆಲೆ 1 ರೂ

## ಪಟಾಕಿ ಅಂಗಡಿಗಳಲ್ಲಿ ಮಕ್ಕಳ ಬಳಕೆಗೆ ನಿರ್ಬಂದ

**ಚಾಮರಾಜನಗರ, ಅಕ್ಟೋಬರ್ 15 (ನಿಂಪುವಾರ್ತೆ):–** ದೀಪಾವಳಿ ಹಬ್ಬದ ಪ್ರಯುಕ್ತ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದ್ದು, ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರೆ ಅಪಾಯಕಾರಿ ಉದ್ದಿಮೆಗಳಲ್ಲಿ ಹಾಗೂ ಅಂಗಡಿಗಳಲ್ಲಿ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳದಂತೆ ಕಾರ್ಮಿಕ ಇಲಾಖೆ ತಿಳಿಸಿದೆ.

ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆ 1986 ತಿದ್ದುಪಡಿ 2016ರನ್ನು ಸರ್ಕಾರ ಜಾರಿಗೊಳಿಸಿದೆ. ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಳೇಧಿಸಿದೆ.

ಅಲ್ಲದೇ 14 ರಿಂದ 18ರ ವಯಸ್ಸಿನ ಕಿಶೋರ ಕಾರ್ಮಿಕ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಯಂತ್ರಿಸಲಾಗಿದೆ. ತಪ್ಪಿದಲ್ಲಿ ಪಟಾಕಿ ಅಂಗಡಿ, ಉದ್ದಿಮೆಗಳ ಮಾಲೀಕರ ವಿರುದ್ಧ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇದ ಮತ್ತು ನಿಯಂತ್ರಣ) ಕಾಯ್ದೆಅನ್ವಯ ಕಾನೂನು ಕ್ರಮ ಜರಿಗಿಸಲಾಗುವುದು ಎಂದು ಕಾರ್ಮಿಕ ಅಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸದಸ್ಯ ಕಾರ್ಯದರ್ಶಿಗಳಾದ ಟಿ.ಸಿ. ರಾಮಚಂದ್ರಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ಜನಪದ ಕಲೆಗಳಿಗೆ ಬೆಳಕುಚೆಲ್ಲಿ : ನಗರಸಭೆ ಅಧ್ಯಕ್ಷ ಎಸ್.ಸುರೇಶ್ ಅಭಿಮತ





**ಚಾಮರಾಜನಗರ, ಅಕ್ಟೋಬರ್ 16 (ನಿಂಪುವಾರ್ತೆ):–** ಯುವಜನರು ಜಿಲ್ಲೆಯ ಜಾನಪದ ಕಲೆಗಳು ಸೇರಿದಂತೆ ವಿವಿಧ ಕಲಾಪ್ರಾಕಾರಗಳನ್ನು ರಾಜ್ಯ, ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಅನಾವರಣಗೊಳಿಸಿ ಜಿಲ್ಲೆಗೆ ಕೀರ್ತಿ ತರುವಂತೆ ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್ ಅವರು ಸಲಹೆ ಮಾಡಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೇರಾ ಯುವ ಭಾರತ್ ಹಾಗೂ ರಾಷ್ಟೀಯ ಸೇವಾ ಯೋಜನೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 'ಜಿಲ್ಲಾ ಮಟ್ಟದ ಯುವಜನೋತ್ಸವ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಾಮರಾಜನಗರ ಜಿಲ್ಲೆ ಜಾನಪದ ಕಲೆಗಳ ತವರೂರು. ಜಿಲ್ಲೆಯ ಸಾಕಷ್ಟು ಕಲಾವಿದರು ವಿವಿಧ ಸಾಂಸ್ಕೃತಿಕ ಕಲಾಪ್ರಾಕಾರಗಳಲ್ಲಿ ತೊಡಗಿಸಿಕೊಂಡು ಜಿಲ್ಲೆಯನ್ನು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸುವ ಕೆಲಸ ಮಾಡಿದ್ದಾರೆ. ಕಲಾವಿದರು ತಮ್ಮಲ್ಲಿರುವ ಕಲಾಪ್ರತಿಭೆ ಹೊರತರಲು ಯುವಜನೋತ್ಸವ ಕಾರ್ಯಕ್ರಮವನ್ನು ವೇದಿಕೆಯಾಗಿ ಬಳಸಿಕೊಳ್ಳುವ ಮೂಲಕ ಜಿಲ್ಲೆಗೆ ಉತ್ತಮ ಹೆಸರು ತರಬೇಕು ಎಂದು ಸುರೇಶ್ ಅವರು ಆಶಿಸಿದರು. ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಿ.ಸಿ. ಶೃತಿ ಅವರು ಮಾತನಾಡಿ ಚೆಲುವ ಚಾಮರಾಜನಗರ ಜಾನಪದ ಕಲೆಗಳ ತವರೂರು. ಅನೇಕ ಜಾನಪದ ಕಲೆಗಳನ್ನು ರಾಷ್ಟ್ರಮಟ್ಟದಲ್ಲಿ ಪ್ರದರ್ಶಿಸಿದ ಕೀರ್ತಿ ಜಿಲ್ಲೆಗೆ ಸಲ್ಲುತ್ತದೆ. ಯುವಜನೋತ್ಸವ ಕಾರ್ಯಕ್ರಮವು ಯುವ ಸಮೂಹಕ್ಕೆ ತಮ್ಮ ಕಲೆಗಳನ್ನು ಹೊರ ಹಾಕಲು ಒಂದು ವೇದಿಕೆಯಾಗಿದೆ. ಪ್ರತಿಯೊಂದು ಸ್ಪರ್ಧೆಯು ಸೋಲು ಗೆಲುವಿನಂದ ಕೂಡಿದ್ದು, ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು ಎಂದು ಕಿವಿಮಾತು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನರ್ದೇಶಕರಾದ ಕೆ. ಸುರೇಶ್ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ದೇವಾನಂದ ವರಪ್ರಸಾದ್, ಚಾಮರಾಜನಗರ ವಿ.ವಿ. ಜಾನಪದ ವಿಭಾಗದ ಮುಖ್ಯಸ್ಥರಾದ ಡಾ. ಬಿ.ಎಸ್ ಜಗದೀಶ್, ಎನ್.ಎಸ್.ಎಸ್. ಸಂಯೋಜಕರಾದ ಡಾ. ಮಹೇಶ್, ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷರಾದ ಸುರೇಶ್ ಋಗ್ವೇದಿ, ಜನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ, ದಸರಾ ಸ್ತಬ್ಧಚಿತ್ರ ಚಿತ್ರ ಕಲಾವಿದರಾದ ಮಧುಸೂದನ್, ಸಾಹಿತಿ ಶೀಲಾ ಸತ್ಯೇಂದ್ರಸ್ವಾಮಿ, ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತರಾದ ಜಿ. ಬಂಗಾರು, ಮುಖಂಡರಾದ ಪದ್ಮಾ ಪುರುಷೋತ್ತಮ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ನಿಂಪು ವಾರ್ತೆ

## ಕೋಳಿಮರಿಗಳ ವಿತರಣೆ : ಅರ್ಜಿ ಆಹ್ವಾನ

**ಚಾಮರಾಜನಗರ, ಅಕ್ಟೋಬರ್ 16 (ನಿಂಪುವಾರ್ತೆ):–** ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳ ನಿಯಮಿತ, ಮೈಸೂರು ವಿಭಾಗ ವತಿಯಿಂದ 2025-26ನೇ ಸಾಲಿಗೆ ಗ್ರಾಮೀಣ ಭಾಗದ ಬಡತನ ರೇಖೆಗಿಂತ ಕೆಳಗಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಾಮಾನ್ಯ ವರ್ಗದ ರೈತಾಪಿ ಮಹಿಳೆಯರಿಗೆ 5 ವಾರದ 20 ಕೋಳಿ ಮರಿಗಳನ್ನು ತಲಾ 20ರಂತೆ ವಿತರಿಸಿ ಅವರ ಆದಾಯ ಹೆಚ್ಚಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಆಸಕ್ತ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೊಳ್ಳೇಗಾಲ ತಾಲ್ಲೂಕಿನ ಪರಿಶಿಷ್ಟ ಜಾತಿಗೆ ಶೇ.17ರಷ್ಟು, ಪರಿಶಿಷ್ಟ ಪಂಗಡಕ್ಕೆ ಶೇ.71ರಷ್ಟು, ಸಾಮಾನ್ಯ ವರ್ಗಕ್ಕೆ ಶೇ.44 ಹಾಗೂ ಹಿಂದುಳಿದ ವರ್ಗಗಳಿಗೆ ಶೇ. 32ರಷ್ಟು ಸೇರಿದಂತೆ ಒಟ್ಟು 99 ಗುರಿಯನ್ನು ನಗದಿಪಡಿಸಲಾಗಿದೆ. ಬಡತನ ರೇಖೆಗಿಂತ ಕೆಳಗಿರುವ ಆಸಕ್ತಿಯುಳ್ಳ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಸಾಮಾನ್ಯ ವರ್ಗದ ಗ್ರಾಮೀಣ ಮಹಿಳೆಯರು, ಸ್ವಸಹಾಯ ಸಂಘದ ಮಹಿಳಾ ಸದಸ್ಯರು, ರೈತ ಉತ್ಪಾದಕ ಸಂಸ್ಥೆಯ ಮಹಿಳೆ ಸದಸ್ಯರು ಹಾಗೂ ಕುಕ್ಕುಟ ಸಹಕಾರ ಸಂಘಗಳ ಮಹಿಳಾ ಸದಸ್ಯರು, ರೈತಾಪಿ ಮಹಿಳೆಯರು ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು ಕೊಳ್ಳೇಗಾಲ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳ (ಆಡಳಿತ) ಕಚೇರಿಯಲ್ಲಿ ಪಡೆದು ನವೆಂಬರ್ 20ರೊಳಗೆ ಸಲ್ಲಿಸಬೇಕು ಎಂದು ಪಶುಪಾಲನಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸುಪ್ರೀಂ ಕೋರ್ಟ್ ನ್ಯಾಯಾದೀಶರಿಗೆ ಅವಮಾನ ಖಂಡಿಸಿ ಪ್ರತಿಭಟನೆ

ಹನೂರು: ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಬಿ.ಆರ್. ಗವಾಯಿ ರವರ ಮೇಲೆ ಶೂ ಎಸೆದ ಅಮಾನವೀಯ ಕೃತ್ಯವನ್ನು ತೀವ್ರವಾಗಿ ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಹನೂರು ಪಟ್ಟಣದಲ್ಲಿ ಬುಧವಾರದಂದು ಪ್ರತಿಭಟನೆ ನೆಡೆಸಲಾಯಿತು

ಹನೂರು ಪಟ್ಟಣದ ಮುಖ್ಯ ರಸ್ತೆಯಲ್ಲಿ ಪ್ರತಿಭಟನಾಕಾರರು ದಿಕ್ಕಾರದ ಘೋಳಣೆಗಳನ್ನು ಕೂಗಿ ಮೆರವಣಿಗೆ ನಡೆಸಿದರು. ಬಳಿಕ ಹನೂರು ತಹಸೀಲ್ದಾರ್ ರವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ತಮ್ಮ ಮನವಿಯಲ್ಲಿ ಈ ಕೃತ್ಯವನ್ನು ತೀವ್ರವಾಗಿ ಖಂಡಿಸಿ, ಸಂವಿಧಾನಾತ್ಮಕ ಪದವಿಯನ್ನು ಹೊತ್ತ ನ್ಯಾಯಮೂರ್ತಿಯೊಬ್ಬರ ವಿರುದ್ಧ ಈ ರೀತಿಯ ಅವಮಾನಕಾರಿ ವರ್ತನೆಯ ಬಗ್ಗೆ ತಕ್ಷಣದ ತನಿಖೆ ಹಾಗೂ ಸಂಬಂಧಪಟ್ಟವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.



ಪ್ರತಿಭಟನೆಯ ನಂತರ ಸಂಘಟನೆಯ ರಾಜ್ಯ ಸಂಚಾಲಕ ನಂಜುಂಡ ಮೌರ್ಯ ಮಾತನಾಡಿ


ನ್ಯಾಯಮೂರ್ತಿ ಗವಾಯಿ ಅವರು ದೇಶದ ಅಗ್ರ ನ್ಯಾಯಸ್ಥಾನದಲ್ಲಿ ಸೇವೆ ಸಲ್ಲಿಸುತ್ತಿರುವ ಸಂವಿಧಾನದ ನ್ಯಾಯಮೂರ್ತಿಗಳಾಗಿದ್ದಾರೆ. ಅವರ ಮೇಲೆ ನಡೆದ ಈ ದುಳ್ಕೃತ್ಯವನ್ನು ನಾವು ದಲಿತ ಸಮುದಾಯದ ಮೇಲೆ ನಡೆದ ದಾಳಿಯಾಗಿ ಪರಿಗಣಿಸುತ್ತೇವೆ. ದೇಶದ ನ್ಯಾಯ ವ್ಯವಸ್ಥೆಯ ಭದ್ರತೆಗಾಗಿ, ಅಂತಹ ಕೃತ್ಯಗಳನ್ನು ಖಂಡಿಸಲೇ ಬೇಕು," ಎಂದರು.ಈ ಸಂದರ್ಭ ಡಿ.ಎ¸ÍŽಸ್ನ ಸದಸ್ಯರಾದ ಜಯದೇವ್, ಗೋವಿಂದ, ರಮೇಶ್, ವೇಲು, ಹುಚ್ಚಯ್ಯ, ರಾಮು, ರಾಜು, ಸುಲೋಚನ, ಮತ್ತು ಮಂಜುಳಮ್ಮ ಹಾಗೂ ಹಲವಾರು ಕಾರ್ಯಕರ್ತರು ಉಪಸ್ಥಿತರಿದ್ದರು.

## ದೀಪಾವಳಿ ಜಾತ್ರೆಗೆ ಸಕಲ ಸಿದ್ದತೆ

ಹನೂರು :ದೀಪಾವಳಿ ಜಾತ್ರಾ ಹಿನ್ನೆಲೆಯಲ್ಲಿ ಮಲೆ ಮಹದೇಶ್ವರಬೆಟ್ಟಕ್ಕೆ ಮಾದಪ್ಪನ ದರ್ಶನಕ್ಕೆಂದು ಬರುವ ಭಕ್ತರಿಗೆ ಮಲೆ ಮಹದೇಶ್ವರಬೆಟ್ಟ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಗತ್ಯ ಮೂಲ ಸೌಕರ್ಯ ಕಲ್ಪಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಪ್ರಾಧಿಕಾರದ ಕಾರ್ಯದರ್ಶಿ ಎ.ಇ.ರಘು ತಿಳಿಸಿದ್ದಾರೆ.

ಮಹದೇಶ್ವರಬೆಟ್ಟದಲ್ಲಿ ಅಕ್ಟೋಬರ್ 18ರಿಂದ 22 ರವರಗೆ 5 ದಿನಗಳ ಕಾಲ ಜಾತ್ರಾ ಮಹೋತ್ಸವ ನಡೆಯಲಿದ್ದು, ಲಕ್ಷಾಂತರ ಭಕ್ತರು ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಭಕ್ತರ ಅನುಕೂಲಕ್ಕಾಗಿ ಕುಡಿಯುವ ನೀರು, ದಾಸೋಹ ವ್ಯವಸ್ಥೆ, ವಸತಿ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆಯನ್ನು ಕೈಗೊಳ್ಳಲಾಗಿದೆ.

ಭಕ್ತರಿಗಾಗಿ ಪ್ರಸಾದಕ್ಕಾಗಿ ಸುಮಾರು 4.5 ಲಕ್ಷ ಲಾಡು ತಯಾರಿಸುವ ಗುರಿ ಹೊಂದಲಾ ಗಿದ್ದು, ಈ ಗಾಗಲೇ 2ಲಕ್ಷ ಲಾಡುಗಳನ್ನು ಸಿದ್ಧಪಡಿಸಿಕೊಳ್ಳಲಾಗಿದೆ. ಅಲ್ಲದೆ ಮಹದೇಶ್ವರಬೆಟ್ಟಕ್ಕೆ ಬರುವ ಭಕ್ತರ ಅನುಕೂಲಕ್ಕಾಗಿ ಕೆ¸Í†ರ್ ಟಿಸಿಯಿಂದ ಹೆಚ್ಚಿನ ಬಸ್ ವ್ಯವಸ್ಥೆ ಕೈಗೊಳ್ಳಲಾಗಿದೆ. ಒಟ್ಟಾರೆ ಐದು ದಿನಗಳ ಕಾಲ ನಡೆಯುವ ದೀಪಾವಳಿ ಜಾತ್ರಾಮಹೋತ್ಸವಕ್ಕೆ ಜಿಲ್ಲಾಡಳಿತ ಹಾಗೂ ಮಹದೇಶ್ವರಬೆಟ್ಟ ಅಭಿವೃದ್ಧಿ ಪ್ರಾಧಿಕಾರ ಸಕಲ ಸಿದ್ಧತೆ ಕೈಗೊಂಡಿದೆ ಎಂದು ತಿಳಿಸಿದ್ದಾರೆ.



ನಿಂಪುವಾರ್ತೆ ದಿನಪತ್ರಿಕೆಗೆ
ಯಳಂದೂರಿನಲ್ಲಿ ವರದಿಗಾರರು ಬೇಕಾಗಿದ್ದಾರೆ : 7353233047

## ಅತ್ಯಾಚಾರ ಕೃತ್ಯ ಖಂಡಿಸಿ ಪ್ರತಿಭಟನೆ



ಕೊಳ್ಳೇಗಾಲ: ಮೈಸೂರಿನಲ್ಲಿ 10 ವರ್ಷದ ಬಾಲಕಿಯ ಮೇಲೆ ನಡೆದ ಅತ್ಯಾಚಾರ ಹಾಗೂ ಹತ್ಯೆ ಪ್ರಕರಣಕ್ಕೆ ತೀವ್ರ ಖಂಡನೆ ವ್ಯಕ್ತಪಡಿಸಿರುವ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಬಣದ ಪದಾಧಿಕಾರಿಗಳು, ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿ ಕೊಳ್ಳೇಗಾಲದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು, ಘೋಷಣೆಯೊಂದಿಗೆ ಮೆರವಣಿಗೆ ನಡೆಸಿ ತಾಲ್ಲೂಕು ಕಚೇರಿಗೆ ತೆರಳಿ, ಗ್ರೇಡ್-2 ತಹಶಿಲ್ದಾರ್ ಕುಮಾರ್ ಅವರಿಗೆ ಮನವಿ ಸಲ್ಲಿಸಿದರು.ಪ್ರತಿಭಟನೆಯಲ್ಲಿ ಕರವೇ ಸ್ವಾಭಿಮಾನ ಬಣದ ಜಿಲ್ಲಾಧ್ಯಕ್ಷ ಶಬ್ಬೀರ್ ಪಾಳ ಮಾತನಾಡಿ,ದೇಶದಲ್ಲಿ ಬಾಲಕಿಯರ ಮೇಲೆ ನಡೆಯುತ್ತಿರುವದೌರ್ಜನ್ಯವು ಅತ್ಯಂತ ವಿಷಾಧನೀಯವಾಗಿದೆ. ಮೈಸೂರಿನ ಈ ಹೀನ ಕೃತ್ಯದಲ್ಲಿ ಭಾಗಿಯಾಗಿರುವ ಆರೋಪಿಗೆ ತಕ್ಷಣವೇ ಕಠಿಣ ಶಿಕ್ಷೆ ನೀಡಬೇಕಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಕಾನೂನು ವ್ಯವಸ್ಥೆ ಬಲಪಡಿಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಪ್ರದೀಪ್ ಕುಮಾರ್ ತಾಲ್ಲೂಕು ಅಧ್ಯಕ್ಷ ಅಜ್ಗರ್ ಪಾಳ, ಉಪಾಧ್ಯಕ್ಷ ವಜಾಹತ್, ಜಿಲ್ಲಾ ಕಾರ್ಯದರ್ಶಿ ಮುಬಾರಕ್ ಅಹಮ್ಮದ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಭಾಗ್ಯ, ಕಾರ್ಯದರ್ಶಿ ರಾಧ, ಪ್ರಧಾನ ಕಾರ್ಯದರ್ಶಿ ನಾಗವೇಣಿ, ಮಹಿಳಾ ಮುಖ್ಯಸ್ಥೆ ಶೋಭ.ಎಚ್.ಎನ್, ಸದಸ್ಯರು ಸಿ. ಪ್ರಸಾದ್, ಸುದೀಪ್, ಇಮ್ರಾನ್ ಪಾಳ, ರೋಷನ್ ಮತ್ತಿತರರು ಉಪಸ್ಥಿತರಿದ್ದರು.

ನಿಂಪು ವಾರ್ತೆ

## ನ. 13 ರಿಂದ 16ರವರೆಗೆ ಬೆಂಗಳೂರಿನಲ್ಲಿ ಕೃಷಿ ಮೇಳ

**ಚಾಮರಾಜನಗರ, ಅಕ್ಟೋಬರ್ 15 (ನಂಪುವಾರ್ತೆ):–** ಬೆಂಗಳೂರು ಕೃಷಿ ವಿಶ್ವವಿದ್ಯಾನಲಯ, ಕರ್ನಾಟಕ ಸರ್ಕಾರದ ಕೃಷಿ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಮತ್ತು ಕರ್ನಾಟಕ ಹಾಲು ಮಹಾ ಮಂಡಳಿ ಸಂಯುಕ್ತಾಶ್ರಯದಲ್ಲಿ ನವೆಂಬರ್ 13ರಿಂದ 16ರವರೆಗೆ 4 ದಿನಗಳ ಕಾಲ ಕೃಷಿ ಮೇಳವನ್ನು ಬೆಂಗಳೂರಿನ ಕೃಷಿ ವಿಶ್ವವಿದ್ಯಾನಲಯದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಕೃಷಿ ಮೇಳದಲ್ಲಿ ವಿಶೇಷ ಆಕರ್ಷಣೆಗಳಾಗಿ ಸಮಗ್ರ ಬೇಸಾಯ ಪದ್ಧತಿ ಪ್ರಾತ್ಯಕ್ಷಿಕೆ, ಖುಷ್ಕಿ ಬೇಸಾಯಕ್ಕೆ ಸೂಕ್ತವಾದ ಬೆಳೆ ಪದ್ಧತಿಗಳು, ಸಿರಿಧಾನ್ಯಗಳ ಮಹತ್ವ, ಜಲಾನಯನ ನರ್ವಹಣೆ, ಸಾವಯವ ಕೃಷಿ ಪದ್ಧತಿಗಳು, ರೇಷ್ಮೆ ಕೃಷಿ, ತೋಟಗಾರಿಕೆ ಬೆಳೆಗಳು, ಸುಧಾರಿತ ಕೃಷಿ ಯಂತ್ರೋಪಕರಣಗಳ ಪ್ರದರ್ಶನ, ಕೊಯ್ಲಿನೋತ್ತರ ತಾಂತ್ರಿಕತೆ, ವಿವಿಧ ಪ್ರಾತ್ಯಕ್ಷಿಕೆ ತಾಕುಗಳು, ನಖರ ಕೃಷಿ ಪ್ರಾತ್ಯಕ್ಷಿಕೆ, ಮಣ್ಣು ರಹಿತ ಕೃಷಿ ಮತ್ತು ಕೃಷಿ ಪ್ರವಾಸೋದ್ಯಮ ಹಾಗೂ ಮಳಿಗೆಗಳ ವ್ಯವಸ್ಥೆ ಮಾಡಲಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ಕೃಷಿಕರು, ರೈತ ಮಹಿಳೆಯರು, ವಿವಿಧ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಕರು ಭಾಗವಹಿಸಿ ಕೃಷಿ ಮೇಳದ ಪ್ರಯೋಜನವನ್ನು ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಶ್ವವಿದ್ಯಾನಲಯದ ವಿಸ್ತರಣಾ ನರ್ದೇಶನಾಲಯ, ಬೆಂಗಳೂರು ದೂ.ಸಂ. 080-23418883, 23330153, ವಿಶ್ವವಿದ್ಯಾನಲಯದ ವಿಸ್ತರಣಾ ಜಾಲತಾಣ www.uasbangalore.edu.in ಅಥವಾ ನಗರದ ಹರದನಹಳ್ಳಿ ಫಾರಂನಲ್ಲಿರುವ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಕಿಸುವಂತೆ ಐ.ಸಿ.ಎ.ಆರ್. ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನ ಮತ್ತು ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಂಪುವಾರ್ತೆ 7353233047